**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಮೆಟ್ರಿಕ್ ನಂತರದ ವಿವಿಧ ಕೋರ್ಸ್ ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ/ಕಾಲೇಜು ಶುಲ್ಕ ಪಾವತಿಸುವ ಬಗ್ಗೆ.

ಓದಲಾಗಿದೆ: 1. ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯ ನವದೆಹಲಿ ರವರ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನದ ಮಾರ್ಗಸೂಚಿ-ಎಪ್ರಿಲ್-2018.

2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ: ಸಕನಿ/ಇಡಿ-03 /ಸಿಆರ್-ಮೆ.ನಂ./2019-20, ದಿನಾಂಕ: 09-07-2020

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ಏಪ್ರಿಲ್-2018ರ ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪರಿಷ್ಕೃತ ಮಾರ್ಗಸೂಚಿಯನ್ವಯ The fee claimed against management quota seats, spot admission seats in any Institution/University will not be reimbursed ಎಂದು ತಿಳಿಸಿರುತ್ತದೆ.

ಈ ಹಿನ್ನೆಲೆಯಲ್ಲಿ 2018-19 ನೇ ಸಾಲಿನಿಂದ ಮ್ಯಾನೇಜ್ ಮೆಂಟ್ ಕೋಟಾದಡಿಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಕಾಲೇಜು ಶುಲ್ಕಗಳನ್ನು ಮಂಜೂರು ಮಾಡದಿರಲು ಹಾಗೂ ಅದಕ್ಕಿಂತ ಹಿಂದಿನ ವರ್ಷಗಳಲ್ಲಿ ಮ್ಯಾನೇಜ್ ಮೆಂಟ್ ಕೋಟಾದಡಿಯಲ್ಲಿ ಆಯ್ಕೆಯಾಗಿ ವ್ಯಾಸಂಗ ಮುಂದುವರೆಸುತ್ತಿರುವ ವಿದ್ಯಾರ್ಥಿಗಳಿಗೆ ಅವರ ಕೋರ್ಸ್ ಮುಕ್ತಾಯದವರೆಗೆ ಕಾಲೇಜು ಶುಲ್ಕಗಳನ್ನು ಸರ್ಕಾರ ನಿಗದಿಪಡಿಸಿದಂತೆ ಪಾವತಿಸಲು ಸರ್ಕಾರದ ಆದೇಶ ಸಂಖ್ಯೆ: ಸಕಇ 288 ಪಕವಿ 2017, ದಿನಾಂಕ: 24-04-2017ಕ್ಕೆ ಮತ್ತು ಆದೇಶ ಸಂಖ್ಯೆ ಸಕಇ 205 ಪವಯೋ 2017, ದಿನಾಂಕ:17-06-2017ಕ್ಕೆ ಸೂಕ್ತ ತಿದ್ದುಪಡಿ ಆದೇಶ ಹೊರಡಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಆಯುಕ್ತರು ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 322 ಪಕವಿ 2020, ದಿನಾಂಕ: 29-08-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018ರ ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪರಿಷ್ಕೃತ ಮಾರ್ಗಸೂಚಿಯನ್ವಯ 2018-19ನೇ ಸಾಲಿನಿಂದ ಮ್ಯಾನೇಜ್‌ಮೇಂಟ್ ಕೋಟಾದಡಿಯಲ್ಲಿ ಆಯ್ಕೆಯಾದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಕಾಲೇಜು ಶುಲ್ಕಗಳನ್ನು ಪಾವತಿಸಬಾರದೆಂದು ಆದೇಶಿಸಿದೆ.

ಮುಂದುವರೆದು, 2018-19ನೇ ಸಾಲಿನ ಪೂರ್ವದ ವರ್ಷಗಳಲ್ಲಿ ಮ್ಯಾನೇಜ್‌ಮೇಂಟ್ ಕೋಟಾದಡಿಯಲ್ಲಿ ಆಯ್ಕೆಯಾಗಿ ವ್ಯಾಸಂಗ ಮುಂದುವರೆಸುತ್ತಿರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ

---------2

ವಿದ್ಯಾರ್ಥಿಗಳಿಗೆ ಮಾತ್ರ ಅವರ ಪ್ರಸ್ತುತ ಕೋರ್ಸ್ ಮುಕ್ತಾಯದವರೆಗೆ ಆದೇಶ ಸಂಖ್ಯೆ: ಸಕಇ 288 ಪಕವಿ 2017 ದಿನಾಂಕ: 24-04-2017 ಮತ್ತು ಸರ್ಕಾರದ ಆದೇಶ ಸಂಖ್ಯೆ: ಸಕಇ 205 ಪವಯೋ 2017. ದಿನಾಂಕ: 17-06-2017 ರನ್ವಯ ನಿಗದಿಪಡಿಸಿದ ಶುಲ್ಕ ಪಾವತಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಸಿ.ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕಪರಿಶೋಧನೆ-2)ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿ.ಆ.ಸು.ಇ - ಇ-ಆಡಳಿತ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ(ಖಜಾನೆ-2), ಬೆಂಗಳೂರು.
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಬೆಂಗಳೂರು.
7. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ, ಬೆಂಗಳೂರು.
9. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ.
10. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
11. ಸಮಾಜ ಕಲ್ಯಾಣ ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರು/ ಉಪನಿರ್ದೇಶಕರು.
12. ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳಿಗೆ.
13. ಸಂಬಂಧಿಸಿದ ಎಲ್ಲಾ ಜಿಲ್ಲಾ/ತಾಲ್ಲೂಕು ಉಪ ಖಜಾನಾಧಿಕಾರಿಗಳು.
14. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಉಪಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.

* * * *